## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕಾರ್ಯನಿರ್ವಾಹಕ ಅಧಿಕಾರಿ, ಆನೇಕಲ್ ತಾಲ್ಲೂಕು ಪಂಚಾಯಿತಿ ಇವರ ಉಪಯೋಗಕ್ಕಾಗಿ ಹೊಸ ವಾಹನ ಖರೀದಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ, ಬೆಂಗಳೂರು ಇವರ ಪತ್ರ ಸಂ. ಆಡಳಿತ (4):ವಾಹನ ಹರಾಜು:50:2014-15 ದಿನಾಂಕ 02.01.2015.

:-:

**ಪ್ರಸ್ತಾವನೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ, ಬೆಂಗಳೂರು ಇವರು ಮೇಲೆ ಓದಲಾದ ದಿನಾಂಕ 02.01.2015 ರ ಪತ್ರದಲ್ಲಿ ಹೊಸ ವಾಹನ ಮಹೇಂದ್ರ ಕಂಪನಿಯ ಬೊಲೋರೋ SLE 2 WDBS4AC ಹೊಸ ವಾಹನವನ್ನು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಆನೇಕಲ್ ಖರೀದಿಸಲು ಹಾಗೂ ಸದರಿ ವೆಚ್ಚವನ್ನು ತಾಲ್ಲೂಕು ಪಂಚಾಯಿತಿಗೆ ಹಂಚಿಕೆ ಮಾಡಿರುವ ಅನುದಾನದಲ್ಲಿ ಭರಿಸಲು ಸರ್ಕಾರದ ಅನುಮತಿಯನ್ನು ಕೋರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ, ಬೆಂಗಳೂರು ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 29 ಕೆಎಸ್ಎಸ್ 2015 ಬೆಂಗಳೂರು**
**ದಿನಾಂಕ 24.07.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಆನೇಕಲ್ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ಉಪಯೋಗಕ್ಕಾಗಿ ಹೊಸ ವಾಹನವನ್ನು 2015-16ನೇ ಸಾಲಿನಲ್ಲಿ ಲಭ್ಯವಿರುವ ಅನುದಾನದಲ್ಲಿ ವೆಚ್ಚವನ್ನು ಭರಿಸಿ ಖರೀದಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿದೆ.

1. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 111 ಶಿವಾನೀ 2011 ದಿನಾಂಕ 9.05.2013 ರಲ್ಲಿ ನಿಗದಿಪಡಿಸಿರುವ ರೂ. 6.50 ಲಕ್ಷಗಳ (ಆರು ಲಕ್ಷದ ಐವತ್ತು ಸಾವಿರ ರೂ.ಗಳು ಮಾತ್ರ) (ತೆರಿಗೆ ಹೊರತುಪಡಿಸಿ) ಮಿತಿಯೊಳಗೆ ಖರೀದಿಸುವುದು.
2. ಹಳೆಯ ವಾಹನವನ್ನು ನಿಯಮಾನುಸಾರ ವಿಲೇವಾರಿ ಮಾಡಿ ಅದರಿಂದ ಬರುವ ಮೌಲ್ಯವನ್ನು ಸರ್ಕಾರಿ ಲೆಕ್ಕ ಶೀರ್ಷಿಕೆಗೆ ಜಮಾ ಮಾಡುವುದು.
3. ಸದರಿ ಹೊಸ ವಾಹನ ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ ಹಾಗೂ ಅದರಡಿ ರಚಿಸಿರುವ ನಿಯಮಗಳನ್ನು ಪಾಲಿಸತಕ್ಕದ್ದು.

. . 2 . .

4. ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 127 ವೆಚ್ಚ-6/2015 ದಿನಾಂಕ 09.07.2015 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ, ಬೆಂಗಳೂರು
3. ಖಜಾನಾಧಿಕಾರಿ, ಉಪ ಖಜಾನೆ, ಆನೇಕಲ್.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
6. ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
7. ನಗದು ಶಾಖೆ (ಸೇವೆಗಳು-ಸಿ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
8. ಮೇಲ್ವಿಚಾರಕರು, ಗಣಕ ಕೋಶ, ಗ್ರಾಅ ಮತ್ತು ಪಂ.ರಾಜ್ ಇಲಾಖೆ.
9. ಮಾಹಿತಿ ಕೇಂದ್ರ/ ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.